**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1074 |
| ಸದಸ್ಯರ ಹೆಸರು | : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವ |
| ಉತ್ತರಿಸುವ ದಿನಾಂಕ | : 22.09.2022. |
| ಉತ್ತರಿಸುವವರು | : ಮಾನ್ಯ ಮುಖ್ಯಮಂತ್ರಿಗಳು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 296ಎ ಪ್ರಕಾರ ರಾಜ್ಯದಲ್ಲಿ ಯಾವ ಯಾವ ಭಾಗದಲ್ಲಿ ಕುಂದುಕೊರತೆ ಪ್ರಾಧಿಕಾರಗಳನ್ನು ರಚಿಸಲಾಗಿದೆ; ಅವುಗಳ ಕಾರ್ಯ ವ್ಯಾಪ್ತಿಯೇನು; (ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 233 ಗ್ರಾಪಂಅ 2021, ದಿನಾಂಕ:26-07-2021 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 296-ಎ ರಡಿಯಲ್ಲಿ ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಗಳಲ್ಲಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರಗಳನ್ನು ರಚಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 233 ಗ್ರಾಪಂಅ 2021, ದಿನಾಂಕ:06-08-2021 ರಲ್ಲಿ ಬೆಂಗಳೂರು ನಗರ ಕುಂದು ಕೊರತೆ ನಿವಾರಣಾ ಪ್ರಾಧಿಕಾರ ವ್ಯಾಪ್ತಿಗೆ ಬೆಂಗಳೂರು ಗ್ರಾಮಾಂತರ ಮತ್ತು ತುಮಕೂರು ಜಿಲ್ಲೆಗಳು, ಚಿಕ್ಕಮಗಳೂರು ಕುಂದುಕೊರತೆ ನಿವಾರಣಾ ಪ್ರಾಧಿಕಾರ ವ್ಯಾಪ್ತಿಗೆ ಮೈಸೂರು ಮತ್ತು ಹಾಸನ ಜಿಲ್ಲೆಗಳು, ಬೆಳಗಾವಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರ ವ್ಯಾಪ್ತಿಗೆ ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳು ಮತ್ತು ಕಲಬುರಗಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರ ವ್ಯಾಪ್ತಿಗೆ ಯಾದಗಿರಿ ಮತ್ತು ಬೀದರ್ ಜಿಲ್ಲೆಗಳನ್ನು ಸೇರ್ಪಡೆ ಮಾಡಲಾಗಿತ್ತು.<br><br>ಪ್ರಸ್ತುತ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 233 ಗ್ರಾಪಂಅ 2021, ದಿನಾಂಕ:31-01-2022 ರಲ್ಲಿ ಬೆಂಗಳೂರು ನಗರ ಕುಂದು ಕೊರತೆ ನಿವಾರಣಾ ಪ್ರಾಧಿಕಾರ ವ್ಯಾಪ್ತಿಗೆ ಬೆಂಗಳೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳು, ಚಿಕ್ಕಮಗಳೂರು ಕುಂದುಕೊರತೆ ನಿವಾರಣಾ ಪ್ರಾಧಿಕಾರ ವ್ಯಾಪ್ತಿಗೆ ಮೈಸೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳು, ಬೆಳಗಾವಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರ ವ್ಯಾಪ್ತಿಗೆ ವಿಭಾಗದ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳು ಮತ್ತು ಕಲಬುರಗಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರ ವ್ಯಾಪ್ತಿಗೆ ವಿಭಾಗದ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳನ್ನು ಸೇರ್ಪಡೆ ಮಾಡಿ ಆದೇಶ ಹೊರಡಿಸಲಾಗಿದೆ.<br><br>ಕುಂದು ಕೊರತೆ ನಿವಾರಣಾ ಪ್ರಾಧಿಕಾರವು 1) ನೀರು ಸರಬರಾಜು, 2) ಆರೋಗ್ಯ ನಿರ್ವಹಣೆ, 3) ರಸ್ತೆ ನಿರ್ವಹಣೆ, 4) ಬೀದಿ ದೀಪಗಳ ನಿರ್ವಹಣೆ, 5) ಯಾವುದೇ ಸ್ಕೀಂ ಅಥವಾ ಯೋಜನೆಯ ಫಲಾನುಭವಿಗಳನ್ನು ಗುರುತಿಸುವುದು. 6) ಯಾವುದೇ ಸ್ಕೀಂನ ಅಥವಾ ಯೋಜನೆಯ ಪ್ರಯೋಜನದ ಹಂಚಿಕೆ, 7) ನೈರ್ಮಲೀಕರಣ ನಿರ್ವಹಣೆ, 8) ಯಾವುದೇ ದಸ್ತಾವೇಜುಗಳು ಅಥವಾ ಪ್ರಮಾಣ ಪತ್ರವನ್ನು ಮಂಜೂರು ಮಾಡುವುದು ಅಥವಾ ಹೊರಡಿಸುವುದು, 9) ನಿಯಮಿಸಬಹುದಾದ ಯಾವುದೇ ಇತರ |

| | | |
|---|---|---|
| | | ವಿಷಯ – ಇವುಗಳ ಸಂಬಂಧದಲ್ಲಿ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿ ತೆಗೆದುಕೊಳ್ಳುವ ಕ್ರಿಯೆಯನ್ನು ಮಾಡುವುದರಿಂದ ಅಥವಾ ಬಿಟ್ಟುಬಿಡುವುದರ ಕುರಿತು ಬಾಧಿತ ನಾಗರೀಕರು ನೀಡುವ ಯಾವುದೇ ದೂರನ್ನು ಒಳಗೊಂಡಿರುವುದು ಕಾರ್ಯವ್ಯಾಪ್ತಿಯಾಗಿರುತ್ತದೆ. |
| (ಆ) | ಈವರೆಗೆ ಅಧಿಕಾರಿಗಳ ಮೇಲಿನ ಆರೋಪಗಳಲ್ಲಿ ಎಷ್ಟು ಪ್ರಕರಣಗಳನ್ನು ಕುಂದುಕೊರತೆ ನಿವಾರಣಾ ಪ್ರಾಧಿಕಾರಕ್ಕೆ ವರ್ಗಾಯಿಸಲಾಗಿರುತ್ತದೆ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು) | ಯಾವುದು ಇರುವುದಿಲ್ಲ. |
| (ಇ) | ಜಿಲ್ಲಾ ಮಟ್ಟದಲ್ಲಿ ಕುಂದುಕೊರತೆ ಕುರಿತು, ತನಿಖೆ ನಡೆಸಲು ಕುಂದುಕೊರತೆ ಪ್ರಾಧಿಕಾರಗಳು ಇದ್ದಾಗ್ಯೂ ಸಹ ಸಣ್ಣ ಸಣ್ಣ ವಿಷಯಗಳಿಗೆ ಲೋಕಾಯುಕ್ತದಲ್ಲಿ ಪ್ರಕರಣ ದಾಖಲಾಗಿ ಅಧಿಕಾರಿಗಳ ಕಾರ್ಯಕ್ಷಮತೆಯ ಮೇಲೆ ಒತ್ತಡ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಂತಹ ಪ್ರಕರಣಗಳು ಕರ್ನಾಟಕ ಲೋಕಾಯುಕ್ತದಲ್ಲಿ ದಾಖಲಾಗುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಸಾರ್ವಜನಿಕರು ಮಾನ್ಯ ಕರ್ನಾಟಕ ಲೋಕಾಯುಕ್ತದಲ್ಲಿ ಸಲ್ಲಿಸಿರುವ ದೂರುಗಳನ್ನು ನಿರ್ಬಂಧಿಸಲು ಪ್ರಸ್ತುತ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಯಲ್ಲಿ ಅವಕಾಶವಿರುವುದಿಲ್ಲ. ಆದರೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಪ್ರಕರಣ 8(1)(ಬಿ) ರಲ್ಲಿ ಕರ್ನಾಟಕ ಲೋಕಾಯುಕ್ತರು ಯಾವುದೇ ದೂರುಗಳ ಬಗ್ಗೆ ಸಂಬಂಧಪಟ್ಟ ಇಲಾಖೆಯಲ್ಲಿ ಪರಿಹಾರ ಪಡೆದುಕೊಳ್ಳಲು ಅವಕಾಶವಿದ್ದರೆ ಅಂತಹ ದೂರುಗಳನ್ನು ಸಂಬಂಧಪಟ್ಟ ಇಲಾಖೆಗಳಿಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲು ಕಳುಹಿಸಲು ಅವಕಾಶವಿರುತ್ತದೆ.<br><br>ಪ್ರಸ್ತುತ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 296(ಎ) ರಡಿ ಪಂಚಾಯತ್ ರಾಜ್ ವ್ಯವಸ್ಥೆಗೆ ಸಂಬಂಧಿಸಿದ ದೂರುಗಳನ್ನು ಪರಿಶೀಲಿಸಲು ಮತ್ತು ಕ್ರಮ ಕೈಗೊಳ್ಳಲು ಕುಂದು ಕೊರತೆ ನಿವಾರಣಾ ಪ್ರಾಧಿಕಾರಗಳನ್ನು ಸ್ಥಾಪಿಸಿರುವುದರಿಂದ ಮಾನ್ಯ ಕರ್ನಾಟಕ ಲೋಕಾಯುಕ್ತಕ್ಕೆ ದಾಖಲಾಗುವ ದೂರುಗಳನ್ನು ಲೋಕಾಯುಕ್ತ ಕಾಯ್ದೆ 1984 ರ 8(1)(ಬಿ) ರನ್ವಯ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗೆ ಕಳುಹಿಸುವಂತೆ ಕೋರಲು ಪ್ರಸ್ತಾವನೆಯನ್ನು ಸಿದ್ಧಪಡಿಸಿ ಕಾನೂನು ಇಲಾಖೆಯ ಅಭಿಪ್ರಾಯವನ್ನು ಕೋರಲಾಗಿರುತ್ತದೆ. |

ಸಂಖ್ಯೆ: ಗ್ರಾಅಪ 310 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ